ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

File No:DTE-ADMI0ACM2/77/2021

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:08-07-2021.

## ಸು ತ್ತೋ ಲೆ

**ವಿಷಯ:** 2020-21ನೇ ಸಾಲಿನ ಲ್ಯಾಟರಲ್ ಎಂಟ್ರಿ ಸ್ಕೀಂನಡಿ ಸಂಜೆ ಪಾಲಿಟೆಕ್ನಿಕ್ 03ನೇ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ ಪ್ರವೇಶ ವೇಳಾಪಟ್ಟಿ ಬಗ್ಗೆ.

**ಉಲ್ಲೇಖ:** ಈ ಕಛೇರಿ ಸಮಸಂಖ್ಯೆ ಸುತ್ತೋಲೆ ದಿ:10-06-2021.

-0000000-

ಉಲ್ಲೇಖಿತ ಈ ಕಛೇರಿ ಅಧಿಸೂಚನೆಯಲ್ಲಿ 2020-21ನೇ ಸಾಲಿನ 02 ವರ್ಷಗಳ **ಐ.ಟಿ.ಐ/ದ್ವಿತೀಯ ಪಿ.ಯು.ಸಿ(ವಿಜ್ಞಾನ)/ದ್ವಿತೀಯ ಪಿಯುಸಿ(ತಾಂತ್ರಿಕ ವಿಷಯಗಳು)** ಉತ್ತೀರ್ಣರಾಗಿರುವ ಅರ್ಹ ಅಭ್ಯರ್ಥಿಗಳಿಗೆ ಲ್ಯಾಟರಲ್ ಎಂಟ್ರಿ ಸ್ಕೀಂ ಮುಖಾಂತರ 2ನೇ ವರ್ಷ / 3ನೇ ಸೆಮಿಸ್ಟರ್ ಸಂಜೆ ಡಿಪ್ಲೋಮಾ ಪ್ರವೇಶಕ್ಕೆ ಅನುಸರಿಸಬೇಕಾದ ಸಾಮಾನ್ಯ ಸೂಚನೆಗಳನ್ನು ನೀಡಲಾಗಿದೆ ಹಾಗೂ ದಿನಾಂಕ:30-06-2021ರ ಒಳಗೆ ಅರ್ಜಿ ಸ್ವೀಕೃತಿಗೆ ಅಂತಿಮ ದಿನಾಂಕವನ್ನು ನಿಗಧಿಪಡಿಸಲಾಗಿತ್ತು. ಆದರೆ, ಎಸ್.ಜೆ. ಸರ್ಕಾರಿ (ಸಂಜೆ) ಪಾಲಿಟೆಕ್ನಿಕ್, ಬೆಂಗಳೂರು ಹಾಗೂ ಕರ್ನಾಟಕ ಸರ್ಕಾರಿ (ಸಂಜೆ) ಪಾಲಿಟೆಕ್ನಿಕ್, ಮಂಗಳೂರು ಸಂಸ್ಥೆಯ ಪ್ರಾಂಶುಪಾಲರುಗಳು ಅರ್ಜಿ ಸ್ವೀಕೃತಿ ಅವಧಿಯನ್ನು ದಿನಾಂಕ:15-07-2021ರ ವರಗೆ ವಿಸ್ತರಿಸುವಂತೆ ಕೋರಿರುತ್ತಾರೆ. ಆದರೆ, ಪ್ರಸ್ತುತ ಬೆಸ ಸೆಮಿಸ್ಟರ್ ಆನ್‌ಲೈನ್ ತರಗತಿಗಳು ಪ್ರಾರಂಭವಾಗಿ ಈಗಾಗಲೇ ಒಂದು ತಿಂಗಳಿಗೂ ಹೆಚ್ಚು ಅವಧಿ ಗತಿಸಿರುವುದರಿಂದ ಈ ಸಂದರ್ಭದಲ್ಲಿ ಅರ್ಜಿ ಸ್ವೀಕೃತಿ ಕಾಲವಕಾಶ ವಿಸ್ತರಿಸುವುದು ಸಮಂಜಸವಲ್ಲವೆಂದು ತೀರ್ಮಾನಿಸಿದೆ.

ಅದರಂತೆ, ಪ್ರವೇಶಾತಿಗೆ ಸಂಬಂಧಿಸಿದಂತೆ ನಿಗಧಿತ ಅವಧಿಯೊಳಗೆ ಸ್ವೀಕೃತವಾಗಿರುವ ಅರ್ಜಿಗಳನ್ನು ಪರಿಗಣಿಸಿ, ಎಸ್.ಜೆ. ಸರ್ಕಾರಿ (ಸಂಜೆ) ಪಾಲಿಟೆಕ್ನಿಕ್, ಬೆಂಗಳೂರು ಹಾಗೂ ಕರ್ನಾಟಕ ಸರ್ಕಾರಿ (ಸಂಜೆ) ಪಾಲಿಟೆಕ್ನಿಕ್, ಮಂಗಳೂರು ಪ್ರವೇಶ ಘಟಕದ ಮೂಲಕ ವಿದ್ಯಾರ್ಥಿಗಳ ಆಯ್ಕೆ ಮಾಡುವ ಸಂಬಂಧ ಅನುಸರಿಸಬೇಕಾದ ವೇಳಾಪಟ್ಟಿಯು ಈ ಕೆಳಕಂಡಂತೆ ಇರುತ್ತದೆ.

| | | |
|---|---|---|
| 1. | ಅರ್ಹ ಅಭ್ಯರ್ಥಿಗಳ ತಾತ್ಕಾಲಿಕ ಮೆರಿಟ್ ಪಟ್ಟಿ ಪ್ರಕಟಣೆ | **ದಿ: 08-07-2021** |
| 2. | ಮೆರಿಟ್ ಪಟ್ಟಿಗೆ ಸಂಬಂಧಿಸಿದಂತೆ ಪರಿಷ್ಕರಣೆ/ ತಿದ್ದುಪಡಿಗೆ ಮನವಿ ಸಲ್ಲಿಸುವ ದಿನಾಂಕ: | **ದಿ: 09-07-2021 ರ ಮದ್ಯಾಹ್ನ 12.00 ಘಂಟೆಯ ಒಳಗೆ** |
| 3. | ಅಂತಿಮ ಮೆರಿಟ್ ಪಟ್ಟಿ ಪ್ರಕಟಣೆ | **ದಿ: 09-07-2021 ರ ಸಂಜೆ 5.00 ಘಂಟೆಯ ಒಳಗೆ** |
| 4. | ಪ್ರವೇಶ ಪ್ರಕ್ರಿಯೆಯ ಅವಧಿ | **ದಿ: 10-07-2021 ರಂದು ಎಲ್ಲಾ ಹಂತದ ಪ್ರವೇಶ ಪ್ರಕ್ರಿಯೆಯನ್ನು ಮುಕ್ತಾಯಗೊಳಿಸುವುದು.** |

ಮೇಲ್ಕಂಡ ವೇಳಾಪಟ್ಟಿಯ ಪ್ರಕಾರ ಪ್ರವೇಶವನ್ನು ಮುಗಿಸುವಲ್ಲಿ ಕ್ರಮ ತೆಗೆದುಕೊಳ್ಳಲು ಸೂಚಿಸಲಾಗಿದೆ.

ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.

ನಿರ್ದೇಶಕರು

ITI LATERAL ENTRY EVENING ADM 2020-21

**ಇವರಿಗೆ,**

1. ಪ್ರಿನ್ಸಿಪಾಲರು, ಸರ್ಕಾರಿ ಎಸ್.ಜೆ (ಸಂಜೆ) ಪಾಲಿಟೆಕ್ನಿಕ್, ಬೆಂಗಳೂರು
2. ಪ್ರಿನ್ಸಿಪಾಲರು, ಕರ್ನಾಟಕ ಸರ್ಕಾರಿ (ಸಂಜೆ) ಪಾಲಿಟೆಕ್ನಿಕ್, ಮಂಗಳೂರು

ಸೀಟು ಆಯ್ಕೆ ಪ್ರಕ್ರಿಯೆಯನ್ನು ತಮ್ಮ ಸಂಸ್ಥೆಗಳಲ್ಲಿಯೇ ನಡೆಸುವ ಬಗ್ಗೆ ತಮ್ಮ ಹಂತದಲ್ಲಿಯೇ ಕ್ರಮ ತೆಗೆದುಕೊಂಡು ನಿಯಮಗಳ ಪ್ರಕಾರ ಪ್ರವೇಶ ನಡೆಸುವಲ್ಲಿ ಸೂಕ್ತ ವ್ಯವಸ್ಥೆ ಮಾಡಿ ಆಯುಕ್ತಾಲಯಕ್ಕೆ ಮಾಹಿತಿ ನೀಡುವುದು. ಹಾಗೂ ಈ ಬಗ್ಗೆ ಪ್ರತ್ಯೇಕ ಮಾರ್ಗಸೂಚಿಯನ್ನು ವಿದ್ಯಾರ್ಥಿಗಳಿಗೆ ತಮ್ಮ ಸಂಸ್ಥೆಗಳಲ್ಲಿಯೇ ನೀಡುವುದು. ಹಾಗೂ ಸಂಸ್ಥೆಯ ಸೂಚನಾ ಫಲಕದಲ್ಲೂ ಸಹ ಪ್ರಕಟಿಸುವುದು.

**ಪ್ರತಿ ಮಾಹಿತಿಗಾಗಿ:–**

1) ಮಾನ್ಯ ಆಯುಕ್ತರ ಆಪ್ತಶಾಖೆಗೆ.
2) ಮಾನ್ಯ ನಿರ್ದೇಶಕರ ಆಪ್ತಶಾಖೆಗೆ
3) ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
4) ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
5) ಆಯುಕ್ತರ ಕಛೇರಿ, ತಾಂತ್ರಿಕ ಶಿಕ್ಷಣ ಇಲಾಖೆಯ ಎಲ್ಲಾ ಅಧಿಕಾರಿಗಳಿಗೆ.
6) ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
7) ಪ್ರಿನ್ಸಿಪಾಲರು, ಎಂ.ಇ.ಐ (ಸಂಜೆ) ಪಾಲಿಟೆಕ್ನಿಕ್, ಬೆಂಗಳೂರು
8) ಇ–ಆಡಳಿತ ವಿಭಾಗಕ್ಕೆ – ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
9) ಡಿವಿಪಿ(2) ವಿಭಾಗಕ್ಕೆ ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
10) ಕಡತಕ್ಕೆ